## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 02 |
| ಮಾನ್ಯ ಸದಸ್ಯರ ಹೆಸರು | : | ಶ್ರೀ ಕೆ. ಪ್ರತಾಪ್ ಸಿಂಹ ನಾಯಕ್ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 11.08.2025 |
| ಉತ್ತರಿಸಬೇಕಾದ ಸಚಿವರು | : | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು |

| ಕ್ರ ಸಂ | ಪ್ರಶ್ನೆಗಳು | ಉತ್ತರ |
|---|---|---|
| ಅ) | ರಾಜ್ಯದ ಆರೋಗ್ಯ ಇಲಾಖೆಯಲ್ಲಿ ರಾಷ್ಟ್ರೀಯ ಆರೋಗ್ಯ ಅಭಿಯಾನ (ಎನ್‌ಎಚ್‌ಎಂ) ಅಡಿ ಕಾರ್ಯನಿರ್ವಹಿಸುತ್ತಿರುವ ವೈದ್ಯರು. ವೈದ್ಯಕೀಯ ಸಿಬ್ಬಂದಿ ಸೇರಿದಂತೆ ಸಾವಿರಾರು ಗುತ್ತಿಗೆ ನೌಕರರಿಗೆ ಮೂರು ತಿಂಗಳಿನಿಂದ ವೇತನ ಪಾವತಿಯಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ರಾಷ್ಟ್ರೀಯ ಆರೋಗ್ಯ ಅಭಿಯಾನದಡಿ ಕಾರ್ಯನಿರ್ವಹಿಸುತ್ತಿರುವ ವೈದ್ಯರು, ವೈದ್ಯಕೀಯ ಸಿಬ್ಬಂದಿ ಸೇರಿದಂತೆ ಗುತ್ತಿಗೆ ನೌಕರರಿಗೆ ಜೂನ್ 2025ರ ವರೆಗೂ ವೇತನವನ್ನು ಪಾವತಿಸಲಾಗಿದೆ. |
| ಆ) | ಆರೋಗ್ಯ ಇಲಾಖೆಯಲ್ಲಿ ರಾಷ್ಟ್ರೀಯ ಆರೋಗ್ಯ ಅಭಿಯಾನ (ಎನ್‌ಎಚ್‌ಎಂ) ಅಡಿ ಕಾರ್ಯನಿರ್ವಹಿಸುತ್ತಿರುವ ವೈದ್ಯರು. ವೈದ್ಯಕೀಯ ಸಿಬ್ಬಂದಿ ಸೇರಿದಂತೆ ಸಾವಿರಾರು ಗುತ್ತಿಗೆ ನೌಕರರಿಗೆ ಸಕಾಲದಲ್ಲಿ ವೇತನ ಪಾವತಿಯಾಗದಿರಲು ಕಾರಣಗಳೇನು: | |
| ಇ) | ಸದರಿ ಸಿಬ್ಬಂದಿಗಳಿಗೆ ನೀಡುತ್ತಿರುವ ವೇತನ ಮತ್ತು ಭತ್ಯೆಗಳ ವಿವರಗಳೇನು: | ರಾಷ್ಟ್ರೀಯ ಆರೋಗ್ಯ ಅಭಿಯಾನವು ಆರೋಗ್ಯ ಇಲಾಖೆಯ ಪೂರಕ ಕಾರ್ಯಕ್ರಮವಾಗಿದ್ದು, ಕೇಂದ್ರ ಸರ್ಕಾರದ ಆರ್.ಓ.ಪಿ. (ರೆಕಾರ್ಡ್ ಆಫ್ ಪ್ರೊಸೀಡಿಂಗ್) ಅನುಮೋದನೆಯಾಗಿರುವಂತೆ ಮಾಸಿಕ ವೇತನ ನೀಡಲಾಗುತ್ತಿದೆ.<br><br>ಆರ್.ಓ.ಪಿ ಅನುಮೋದನೆಯಾಗಿರುವಂತೆ ರಾಷ್ಟ್ರೀಯ ಆರೋಗ್ಯ ಅಭಿಯಾನದಡಿ ಕರ್ತವ್ಯ ನಿರ್ವಹಿಸುತ್ತಿರುವ ಗುತ್ತಿಗೆ ನೌಕರರಿಗೆ ಪ್ರತಿ ವರ್ಷ ಶೇ. 5% ರಷ್ಟು ಹೆಚ್ಚುವರಿ ವೇತನ ಹಾಗೂ 3 ವರ್ಷ ಪೂರೈಸಿದ ನಂತರ ಶೇ.10 ರಷ್ಟು ಮತ್ತು ಮತ್ತೆರಡು ವರ್ಷ ಪೂರೈಸಿದ ನಂತರ ಶೇ.5 ರಷ್ಟು Experience Bonus ನೀಡಲಾಗುತ್ತಿದೆ. |

..2...

| | | |
|---|---|---|
| ಈ) | ರಾಷ್ಟ್ರೀಯ ಆರೋಗ್ಯ ಅಭಿಯಾನ (ಎನ್‌ಎಚ್‌ಎಂ) ಅಡಿ ಕಾರ್ಯನಿರ್ವಹಿಸುತ್ತಿರುವ ವೈದ್ಯರು. ವೈದ್ಯಕೀಯ ಸಿಬ್ಬಂದಿಗಳಿಗೆ ಪ್ರತೀ ತಿಂಗಳು ನಿಗದಿತ ಅವಧಿಯೊಳಗೆ ವೇತನ ಪಾವತಿ ಆಗುವಂತೆ ಸರ್ಕಾರ ಕೂಡಲೇ ಅಗತ್ಯ ಕ್ರಮ ವಹಿಸುವುದೇ? | ರಾಷ್ಟ್ರೀಯ ಆರೋಗ್ಯ ಅಭಿಯಾನದಡಿ ಕಾರ್ಯ ನಿರ್ವಹಿಸುತ್ತಿರುವ ವೈದ್ಯರು ಹಾಗೂ ವೈದ್ಯಕೀಯ ಸಿಬ್ಬಂದಿಗಳಿಗೆ ಪ್ರತೀ ತಿಂಗಳು ನಿಗಧಿತ ಅವಧಿಯೊಳಗೆ ವೇತನ ಪಾವತಿಯಾಗುತ್ತಿದೆ. |

**ಸಂಖ್ಯೆ: ಆಕುಕ 57 ಎಸ್.ಟಿ.ಕ್ಯೂ 2025**

**(ದಿನೇಶ್ ಗುಂಡೂರಾವ್)**
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು.